ಬೆಂಗಳೂರು ನಗರದಲ್ಲಿರುವ ನ್ಯಾಯಬೆಲೆ ಅಂಗಡಿಗಳು

೨೬೪. ಶ್ರೀ ಪೆರಿಕಾಲ್ ಎಂ. ಮಲ್ಲಪ್ಪ (ಚಿಕ್ಕಪೇಟೆ).—ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬೆಂಗಳೂರು ನಗರದಲ್ಲಿರುವ ಒಟ್ಟು ನ್ಯಾಯಬೆಲೆ ಅಂಗಡಿಗಳು ಎಷ್ಟು ?

ಆ) ಅವುಗಳಲ್ಲಿ ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದಲ್ಲಿರುವ ನ್ಯಾಯಬೆಲೆ ಅಂಗಡಿಗಳು ಎಷ್ಟು ?

ಇ) ಪ್ರತಿ ನ್ಯಾಯಬೆಲೆ ಅಂಗಡಿಗಳಲ್ಲಿ ಸಮವಾಗಿ ಪಡಿತರ ಚೀಟಿಗಳನ್ನು ಹಂಚಿಕೆ ಮಾಡದೆ ಇರುವ ಸಂಗತಿ ನಿಜವೇ ?

ಈ) ಹಾಗಿದ್ದರೆ ಪ್ರತಿ ನ್ಯಾಯಬೆಲೆ ಅಂಗಡಿಗಳಿಗೆ ಬೇಕಾಗುವಷ್ಟು ಪಡಿತರ ಚೀಟಿಗಳನ್ನು ಒದಗಿಸುವ ಬಗ್ಗೆ ಸರ್ಕಾರವು ಕ್ರಮ ಕೈಗೊಳ್ಳುವುದೇ ?

ಶ್ರೀ ಅಜೀಜ್ ಸೇಠ್ (ಆಹಾರ ಮತ್ತು ನಾಗರೀಕ ಸರಬರಾಜು ಮಂತ್ರಿಗಳು).—

ಅ) ೧೨೫೯

ಆ) ೭೨

ಇ) ಹೌದು.

ಈ) ಬೆಂಗಳೂರು ನಗರ ಅನೌಪಚಾರಿಕ ಪಡಿತರ ಪ್ರದೇಶದಲ್ಲಿನ ವಿಭಾಗಗಳಲ್ಲಿ ಜನಸಂಖ್ಯೆ ಸಮನಾಗಿ ಇಲ್ಲದೆ ಇದ್ದು ಎಲ್ಲಾ ನ್ಯಾಯಬೆಲೆ ಅಂಗಡಿಗಳಿಗೆ ಸಮನಾಗಿ ಪಡಿತರ ಚೀಟಿಗಳನ್ನು ಹಂಚಲು ಸಾಧ್ಯವಿಲ್ಲದಿರುತ್ತದೆ. ಆದರೂ ಸಹ ಪ್ರತಿಯೊಂದು ನ್ಯಾಯಬೆಲೆ ಅಂಗಡಿಗಳಿಗೂ ಕನಿಷ್ಟ ೫೦೦ ಪಡಿತರ ಚೀಟಿಗಳನ್ನು ಹೊಂದಲು ಮತ್ತು ಅವು ಆರ್ಥಿಕವಾಗಿ ಸಾಮರ್ಥ್ಯ ಹೊಂದಲು ಕೇಂದ್ರ ಸರ್ಕಾರದ ನಿಯಮಾವಳಿ ಅನುಸಾರ ಕ್ರಮ ಕೈಗೊಳ್ಳುವುದು.

ಬೆಂಗಳೂರಿನ ಟೌನ್‌ಹಾಲನ್ನು ನವೀಕರಿಸುವ ಬಗ್ಗೆ

೨೬೫. ಶ್ರೀ ಪೆರಿಕಾಲ್ ಎಂ. ಮಲ್ಲಪ್ಪ (ಚಿಕ್ಕಪೇಟೆ).—ಮಾನ್ಯ ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬೆಂಗಳೂರಿನ ಪುರಭವನವನ್ನು ನವೀಕರಿಸುವ ಕೆಲಸವನ್ನು ಸರ್ಕಾರದ ವತಿಯಿಂದ ಕೆಗೆದು ಕೊಳ್ಳಲಾಗಿದೆಯೇ ?

ಆ) ಹಾಗಿದ್ದಲ್ಲಿ ಅಂದಾಜಿನ ಮೊತ್ತವೆಷ್ಟು ?

ಇ) ಯಾವ ಅವಧಿಗೆ ಕಾಮಗಾರಿಯು ಮುಗಿಯಬೇತ್ತದೆ. ಹಾಗೂ ಎಂದಿನಿಂದ ಬಳಸಬಹುದು :

ಶ್ರೀ ಜಿ. ಪುಟ್ಟಸ್ವಾಮಿಗೌಡ (ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು).—

ಅ) ಹೌದು

ಆ) ರೂ. ೧೯.೦೧ ಲಕ್ಷಗಳು

ಇ) ಅನುದಾನ ಲಭ್ಯತೆಯನ್ನಾಧರಿಸಿ, ಈ ಕಾಮಗಾರಿಯನ್ನು ದಿನಾಂಕ ೩೦–೧೦–೯೦ರ ಪೂರ್ತಿಗೆ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ. ಹಾಗೂ ದಿನಾಂಕ ೧–೧೧–೯೦ರಂದು ಈ ಕಟ್ಟಡವನ್ನು ಉಪಯೋಗಕ್ಕೆ ಬಿಡುಗಡೆ ಮಾಡಲು ಉದ್ದೇಶಿಸಲಾಗಿದೆ.

ಪಟ್ಟಣ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಅರ್ಹ ಫಲಾನುಭವಿಗಳ ಪಡಿತರ ಚೀಟಿಗಳನ್ನು ಹೆಚ್ಚಿಸುವ ಬಗ್ಗೆ

೨೬೭. ಶ್ರೀ ಎಸ್. ಷಫಿ ಅಹಮದ್ (ತುಮಕೂರು).—ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಪಟ್ಟಣ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಅರ್ಹ ಫಲಾನುಭವಿಗಳ ಪಡಿತರ ಚೀಟಿಗಳನ್ನು ಹೆಚ್ಚಿಸುವ ಬಗ್ಗೆ ತೆಗೆದುಕೊಂಡಿರುವ ಕ್ರಮದ ಬಗ್ಗೆ